# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 136 ಜೆ.ಜೆ.ಆರ್ ನಗರ ಬೆಂಗಳೂರು

**************************************************************************************

ಸಂಖ್ಯೆ: w-136/Committee/Proceding -19/2021-22 dt. 09-08-2021

## ಸಭೆಯ ನಡವಳಿಗಳು

ಶ್ರೀ ಸತೀಶ್ ಕುಮಾರ್ ಸಮಿತಿಯ ಕಾರ್ಯದರ್ಶಿಗಳು ಸಭೆಯನ್ನು ನಡೆಸುತ್ತಾ ಸಭೆಯಲ್ಲಿ ಉಪಸ್ಥಿತಗೊಂಡ ಮಾನ್ಯ ನೋಡಲ್ ಆಧಿಕಾರಿಗಳಿಗೆ ಮತ್ತು ಉನ್ನತ ಸಭೆಯಲ್ಲಿ ಅಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತಕೋರಿದರು. ನಂತರ ಮಾನ್ಯ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರ ಸಭೆಗೆ ನೀಡುವಂತೆ ಕೋರಿದರು ಹಾಗೂ ಅವಶ್ಯಕವಾಗಿ ನಡೆಯಬೇಕಾದ ಕಾಮಗಾರಿಗಳ ಬಗ್ಗೆ ವಿವರಣೆ ಕೋರಿದರು

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್‌ನಲ್ಲಿ ನಡೆಯುತ್ತಿರುವ ಕಾಮಗಾರಿಗಳ ವಿವರವನ್ನು ನೀಡಿದರು ಹಾಗೂ ಮಾನ್ಯ ಆಯುಕ್ತರ ಆದೇಶದಂತೆ ವಾರ್ಡ್ ವ್ಯಾಪ್ತಿಯಲ್ಲಿರುವ ಶುದ್ದ ಕುಡಿಯುವ ನೀರಿನ ಘಟಕಗಳನ್ನು ಗುರ್ತಿಸಿ ಮೇಲಾಧಿಕಾರಿಗಳಿಗೆ ವರದಿ ನೀಡಿದ್ದು ಮತ್ತು ವಾರ್ಡ್ ವ್ಯಾಪ್ತಿಯಲ್ಲಿರುವ ಅನಧೀಕೃತ ಬ್ಯಾನರ್‌ಗಳನ್ನು ತೆರವುಗೊಳಿಸಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳು ಕಂಡುಬಂದಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಪಿಸಿದರು

ಈ ವಿಷಯದ ಬಗ್ಗೆ ಮಾನ್ಯ ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆಯಲ್ಲಿ ಗುಂಡಿಗಳನ್ನು ಗುರ್ತಿಸಲಾಗಿದ್ದು ಸಂಬಂಧಿಸಿದ ಗುತ್ತಿಗೆದಾರರಿಗೆ ತಿಳಿಸಿ ಗುಂಡಿಗಳನ್ನು ಮುಚ್ಚಿಸಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಆರೋಗ್ಯ ಪರಿವೀಕ್ಷಕರು ವಾಡ್-136 ಮತ್ತು ಕಂದಾಯ ಪರಿವೀಕ್ಷರು ವಾರ್ಡ್-136 ರವರುಗಳಿಗೆ ಕೋವಿಡ್-19 3ನೇ ಅಲೆಯು ಮುನ್ಸೂಚನೆ ಕಂಡು ಬಂದಿದ್ದು ಸೊಂಕಿನ ಬಗ್ಗೆ ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಆರೋಗ್ಯ ಪರಿವೀಕ್ಷಕರು ವಾರ್ಡ್ 136ರ ವ್ಯಾಪ್ತಿಯಲ್ಲಿ ಕೋವಿಡ್-19 ಸೊಂಕಿತರ ಸಂಖ್ಯೆ ಪೂರ್ಣ ಪ್ರಮಾಣದಲ್ಲಿ ಕಡಿಮೇಯಾಗಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು ಹಾಗೂ 3ನೇ ಅಲೆಯು ಹೆಚ್ಚಾಗುವ ಸಂಬಂಧ ಹೆಚ್ಚಿನ ಪ್ರಮಾಣದಲ್ಲಿ ಕೋವಿಡ್-19 ಪರಿಕ್ಷೆಯನ್ನು ವಾರ್ಡ್ ಸುತ್ತ ಮುತ್ತಲಿನ ಪ್ರದೇಶದಲ್ಲಿ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು ಹಾಗೂ ವಾರ್ಡ್ 136ರ ವ್ಯಾಪ್ತಿಯಲ್ಲಿ ಜೆ.ಜೆ.ಆರ್ ನಗರ ಉದ್ಯಾನವನ ಹಾಗೂ ದೇವರಾಜ್ ಅರಸುನಗರ ಸಮೂದಾಯ ಭವನಗಳಲ್ಲಿ 1ನೇ ಮತ್ತು 2ನೇ ಡೊಸ್ ಲಸಿಕೆಯನ್ನು ನೀಡುತ್ತಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಕೋವಿಡ್-19 3ನೇ ಅಲೆಯ ಹೆಚ್ಚುತ್ತಿರುವುದರಿಂದ ಮುಖ ಗವಚವನ್ನು ಧರಿಸದೇ ಅಡ್ಡದಿಡ್ಡಿ ಅನಾವಶ್ಯಕವಾಗಿ ತಿರುಗಾಡುವವರಿಗೆ ದಂಡ ವಿಧಿಸುವಂತೆ ಮಾರ್ಷಲ್‌ಗಳಿಗೆ ಸೂಚಿಸಿದರು.

ಅಧ್ಯಕ್ಷರು: ಬಿಡಬ್ಲೂಎಸ್‌ಎಸ್‌ಬಿ ಕಛೇರಿಗೆ ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಬಂದ ದೂರಿನ ಪುಸ್ತಕವನ್ನು ಪರಿಶೀಲಿಸಿದರು ಹಾಗೂ ಕೈಗೊಂಡ ಕ್ರಮಗಳ ವಿವರವನ್ನು ಕೋರಿದರು

ಬಿಡಬ್ಲೂಎಸ್‌ಎಸ್‌ಬಿ ಅಧಿಕಾರಿಗಳು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು.

ಅಧ್ಯಕ್ಷರು ಬೆಸ್ಕಾಂ ಕಛೆರಿಗೆ ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬೆಸ್ಕಾಂ ಅಧಿಕಾರಿಯವರು ವಾರ್ಡ್ 136 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರುಗಳ ವಿವರ ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು.

ಸಭೆಯಲ್ಲಿ ಹಾಜರಾಗಿರುವ ಸಮಿತಿ ಸದಸ್ಯರಾದ ಶ್ರೀ ಮೊಹಮದ್ ಮುಜಾಮೀಲ್ ಮತ್ತು ಉಮೇಶ್ ರವರು ವಾರ್ಡ್ ವ್ಯಾಪ್ತಿಯಲ್ಲಿ ಕಸ ವಿಲೇವಾರಿ ಗುತ್ತಿಗೆದಾರರು ಸರಿಯಾದ ರೀತಿಯಲ್ಲಿ ಕಾರ್ಯನಿರ್ವಹಿಸದಿರುವ ಬಗ್ಗೆ ಹಿಂದಿನ ಸಭೆಯಲ್ಲಿ ಚರ್ಚಿಸಲು ಸಹಾಯಕ ಕಾರ್ಯಪಾಲಕ ಅಭಿಯಂರರು (ಎಸ್. ಬ್ಲ್ಯೂ.ಎಂ) ಚಾಮರಾಜಪೇಟೆ ರವರನ್ನು ಇಂದಿನ ಸಭೆಗೆ ಕರೆದು ಚರ್ಚಿಸಲು ತಿಳಿಸಲಾಗಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು.

ಸದರಿ ವಿಷಯದ ಬಗ್ಗೆ ಅಧ್ಯಕ್ಷರು ಕಿರಿಯ ಆರೋಗ್ಯ ಪರಿವೀಕ್ಷಕರನ್ನು ಸಭೆಗೆ ವಿವರಣೆ ನೀಡುವಂತೆ ಹಾಗೂ ಪೂರ್ಣ ಮಾಹಿತಿಯನ್ನು ನೀಡಲು ಸೂಚಿಸಿದರು

ಇಂದಿನ ಸಭೆಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾನಿ) ಚಾಮರಾಜಪೇಟೆ ವಿಭಾಗ ಶ್ರೀಮತಿ ರೇಖ ರವರು, ಬೇರೆ ಕಛೇರಿಗೆ ವಾರ್ಗವಣೆಯಾಗಿರುವುದರಿಂದ ಹೊಸದಾಗಿ ನೇಮಕವಾಗಿರುವ ಶ್ರೀ ಶಿವಪ್ಪ ರವರನ್ನು ಮುಂದಿನ ಸಭೆಗೆ ಸಭೆಗೆ ಹಾಜರಾಗುವಂತೆ ಸೂಚಿಸಲಾಗಿದೆ.

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಡಾ॥ ಅಲ್ಲಮಪ್ರಭು, ದೂ. 9480685654<br>ಸಹಾಯಕ ನಿರ್ದೇಶಕರು (ಪಶುಪಾಲನೆ ಪಶ್ಚಿಮ) ಬಿ.ಬಿ.ಎಂ.ಪಿ. | ವಾರ್ಡ್‌ನ ನೋಡಲ್ ಅಧಿಕಾರಿ | [signature] 09/08/2021 |
| 2 | ಶ್ರೀ ಸತೀಶ್ ಕುಮಾರ್<br>ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 136<br>ಬಿ.ಬಿ.ಎಂ.ಪಿ ದೂ. 9986740382 | ಸದಸ್ಯ ಕಾರ್ಯದರ್ಶಿ | [signature] Satish Kumar 09/08/2021 |

| | | | |
|---|---|---|---|
| 3 | ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157<br>ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -136 | ಸದಸ್ಯರು | |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ(ಕಾಮಗಾರಿ) ಜೆ.ಜೆ.ಆರ್ ನಗರ ಉಪ ವಿಭಾಗದ ಪ್ರತಿನಿಧಿ<br>ಶ್ರೀ ಬಾಬು (ಕೆಲಸ ಪರಿವೀಕ್ಷಕರು) 9342582372 | ಸದಸ್ಯರು | |
| 5 | ಆರೋಗ್ಯಾಧಿಕಾರಿಗಳು, ಚಾಮರಜಪೇಟೆ ವಿಭಾಗ ರವರ ಪ್ರತಿನಿಧಿ.<br>ಎನ್. ಲಕ್ಷ್ಮಿ ನರಸಿಂಹಯ್ಯ ದೂ. 9845563157 | ಸದಸ್ಯರು | |
| 6 | ಶ್ರೀ ಉಮೇಶ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 873557760 | ಸದಸ್ಯರು | |
| 7 | ಶ್ರೀ ಮೊಹಮದ್ ಮುಜಾಮೀಲ್<br>ವಾರ್ಡ್ ಪ್ರದೇಶದಲ್ಲಿನ ಸ್ಥಳಿಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ ದೂ. 7349649906 | ಸದಸ್ಯರು | |
| 8 | ಶ್ರೀಮತಿ ಚಂದ್ರಕಲಾ ದೂ. 8904845720<br>ಕಂದಾಯ ಪರಿವೀಕ್ಷಕರು, ವಾರ್ಡ್ ನಂ. 136 | ಸದಸ್ಯರು | |
| 9 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿಎನ್ ಎನ್. ಲಕ್ಷ್ಮಿ ನರಸಿಂಹಯ್ಯ<br>ದೂ. 9845563157 | ಸದಸ್ಯರು | |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರ<br>( ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ | ಸದಸ್ಯರು | |
| 11 | ಸಹಾಯಕ ಕಾರ್ಯ ಪಾಲಕ ಅಭಿಯಂಣತರರು(ಬೆಸ್ಕಂ) ರವರ ಪ್ರತಿನಿಧಿ | ಸದಸ್ಯರು | |

ಸಹಾಯಕ ... (ವಿ)
ಕಾ ... ಉಪ-ವಿಭಾಗ
ಬೆ.ವಿ.ಕಂ., ... ಬೆಂಗಳೂರು-560026

ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 136
ವಾರ್ಡ್ ಹಂತದ ಸಮೀತಿ

ಅಧ್ಯಕ್ಷರು ... /08/2021
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 136

ಪ್ರತಿಯನ್ನು

1. ಜಂಟಿ ಆಯುಕ್ತರು ಪಶ್ಚಿಮ ರಚರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ